ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE : 23/11/20

# ಆಯುರ್ವೇದ ವೈದ್ಯರಿಗೂ ಸರ್ಜರಿಗೆ ಅನುಮೋದನೆ

## ಮೂಗು, ಕಣ್ಣಿನ ಶಸ್ತ್ರಚಿಕಿತ್ಸೆಗೆ ಪಿಜಿ ವೈದ್ಯರಿಗೆ ತರಬೇತಿ

**ಕೇಂದ್ರದಿಂದ ಅಧಿಸೂಚನೆ । ಹೊಸ ನಿರ್ಧಾರವಲ್ಲ, ಸ್ಪಷ್ಟನೆ**

• **ಪಿಟಿಐ** ನವದೆಹಲಿ ಕ.ಪ್ರ. 23/11/20

ಸ್ನಾತಕೋತ್ತರ ಆಯುರ್ವೇದದ 2 ವಿಭಾಗದ ವೈದ್ಯರಿಗೆ ಸಣ್ಣಪುಟ್ಟ ಗಡ್ಡೆ, ಗ್ಯಾಂಗ್ರಿನ್, ಮೂಗು ಹಾಗೂ ಕಣ್ಣಿನ ಶಸ್ತ್ರಚಿಕಿತ್ಸೆಗಳಿಗೆ ಸಂಬಂಧಿಸಿದ ತರಬೇತಿ ನೀಡುವಂತೆ ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸಿದೆ. ಇದರಿಂದಾಗಿ ಆಯುರ್ವೇದ ವೈದ್ಯರು ಸರ್ಜರಿ ನಡೆಸಲು ಕಾನೂನುಬದ್ಧ ಮಾನ್ಯತೆ ಸಿಕ್ಕಂತಾಗಿದೆ.



ಭಾರತೀಯ ವೈದ್ಯ ಪದ್ಧತಿಯನ್ನು ನಿಯಂತ್ರಿಸುವ, ಆಯುಷ್ ಸಚಿವಾಲಯದ ಶಾಸನಬದ್ಧ ಸಂಸ್ಥೆಯಾದ ಕೇಂದ್ರೀಯ ಭಾರತೀಯ ವೈದ್ಯ ಪದ್ಧತಿ ಮಂಡಳಿ ಈ ಕುರಿತಂತೆ ಅಧಿಸೂಚನೆ ಹೊರಡಿಸಿದೆ. ಯಾವ ವಿಭಾಗದ ವೈದ್ಯರಿಗೆ, ಯಾವ್ಯಾವ ಸರ್ಜರಿ ತರಬೇತಿ ನೀಡಬೇಕು ಎಂದು ಸ್ಪಷ್ಟನೆ ನೀಡಿದೆ. ಆ ಪ್ರಕಾರ, ಶಾಲ್ಯ ಹಾಗೂ ಶಾಲಾಕ್ಯ ವಿಷಯದಲ್ಲಿ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿರುವ ವೈದ್ಯರಿಗೆ 39 ಸಾಮಾನ್ಯ ಶಸ್ತ್ರಚಿಕಿತ್ಸೆ ಹಾಗೂ ಕಣ್ಣು, ಮೂಗು, ಕಿವಿ, ಗಂಟಲಿಗೆ ಸಂಬಂಧಿಸಿದ 19 ಸರ್ಜರಿಗಳ ಕುರಿತು ತರಬೇತಿ ನೀಡಲು ಸೂಚಿಸಿದೆ. ಈ ಸಂಬಂಧ 'ಭಾರತೀಯ ವೈದ್ಯಕೀಯ ಕೇಂದ್ರೀಯ ಮಂಡಳಿ (ಸ್ನಾತಕೋತ್ತರ ಆಯುರ್ವೇದ ಶಿಕ್ಷಣ) ನಿಯಂತ್ರಣ, 2016'ಕ್ಕೆ ತಿದ್ದುಪಡಿ ತಂದಿದೆ.

ಆದರೆ ಇದು ನೀತಿ ನಿರೂಪಣೆಯಲ್ಲಾದ ಬದಲಾವಣೆ ಅಲ್ಲ ಅಥವಾ ಹೊಸ ನಿರ್ಧಾರವೂ ಅಲ್ಲ ಎಂದು ಆಯುಷ್ ಸಚಿವಾಲಯದ ಕಾರ್ಯದರ್ಶಿ ವೈದ್ಯ ರಾಜೇಶ್ ಕೊಟೆಚಾ ಸ್ಪಷ್ಟಪಡಿಸಿದ್ದಾರೆ. ಸ್ಪಷ್ಟನೆ ನೀಡುವ ಉದ್ದೇಶದಿಂದ ಅಧಿಸೂಚನೆ ಹೊರಡಿಸಲಾಗಿದೆ. ಎಲ್ಲ ರೀತಿಯ ಆಯುರ್ವೇದ ವೈದ್ಯರಿಗೆ ಸರ್ಜರಿ ನಡೆಸಲು ಅನುಮತಿ ಕೊಟ್ಟಿಲ್ಲ. ಯಾವ್ಯಾವ ಸರ್ಜರಿ ನಡೆಸಬಹುದು ಎಂಬ ಸ್ಪಷ್ಟನೆ ನೀಡಲಾಗಿದೆ. ಶಾಲ್ಯ ಹಾಗೂ ಶಾಲಾಕ್ಯ ಪದವೀಧರರು ಮಾತ್ರ ಸರ್ಜರಿ ನಡೆಸಬೇಕು ಎಂದು ಸೂಚಿಸಲಾಗಿದೆ ಎಂದು ಹೇಳಿದ್ದಾರೆ.

ಕಳೆದ 20 ವರ್ಷಗಳಿಂದ ಆಯುರ್ವೇದ ಸಂಸ್ಥೆಗಳಲ್ಲಿ ಈ ಶಸ್ತ್ರಚಿಕಿತ್ಸೆಗಳನ್ನು ನಡೆಸಿಕೊಂಡು ಬರಲಾಗಿದೆ. ಈ ಅಧಿಸೂಚನೆಯಿಂದ ಅದಕ್ಕೆ ಕಾನೂನಿನ ಮಾನ್ಯತೆ ಸಿಕ್ಕಂತಾಗಿದೆ ಎಂದು ಕೇಂದ್ರೀಯ ಭಾರತೀಯ ವೈದ್ಯ ಪದ್ಧತಿ ಮಂಡಳಿಯ ಮುಖ್ಯಸ್ಥ ವೈದ್ಯ ಜಯಂತ ದೇವಪೂಜಾರಿ ಅವರು ತಿಳಿಸಿದ್ದಾರೆ. ಯಾವ್ಯಾವ ಸರ್ಜರಿಗಳನ್ನು ಆಯುರ್ವೇದ ವೈದ್ಯರು ಮಾಡಬಹುದು ಎಂಬ ಮಿತಿಯನ್ನು ಇದರಲ್ಲಿ ನಿಗದಿಪಡಿಸಲಾಗಿದೆ ಎಂದು ಅವರು ಹೇಳಿದ್ದಾರೆ.

## ಐಎಂಎ ತೀವ್ರ ಖಂಡನೆ

**ನವದೆಹಲಿ:** ಆಯುರ್ವೇದ ವೈದ್ಯರಿಗೆ ಸೂಕ್ತ ತರಬೇತಿ ನೀಡಿ ಕೆಲವು ಶಸ್ತ್ರ ಚಿಕಿತ್ಸೆಗಳನ್ನು ನಡೆಸಲು ಅನುಮತಿ ನೀಡಲು ಮುಂದಾಗಿರುವ ಭಾರತೀಯ ವೈದ್ಯ ಪದ್ಧತಿ ಮಂಡಳಿ (ಸಿಸಿಐಎಂ)ಯ ಕ್ರಮವನ್ನು ಭಾರತೀಯ ವೈದ್ಯ ಸಂಘ (ಐಎಂಎ) ಖಂಡಿಸಿದೆ. ಈ ಕುರಿತ ಆದೇಶ ಪ್ರತಿಯನ್ನು ಹಿಂಪಡೆಯುವಂತೆ ಸಿಸಿಐಎಂಗೆ ಆಗ್ರಹಿಸಿರುವ ಐಎಂಎ, ಇದು ಭಾರತೀಯ ವೈದ್ಯ ವ್ಯವಸ್ಥೆಯನ್ನು ಭ್ರಷ್ಟಗೊಳಿಸುವ ಕ್ರಮ ಎಂದು ಟೀಕಿಸಿದೆ. ಅಲ್ಲದೆ ಎರಡು ವೈದ್ಯ ಪದ್ಧತಿಗಳ ಮಿಶ್ರಣವನ್ನು ಐಎಂಎ ವಿರೋಧಿಸುತ್ತದೆ. ದೇಶಾದ್ಯಂತ ವೈದ್ಯರು ಮತ್ತು ವಿದ್ಯಾರ್ಥಿಗಳ ನೇತೃತ್ವದಲ್ಲಿ ಈ ಕ್ರಮದ ವಿರುದ್ಧ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದೆ. ಇಂಥ ಅಡ್ಡದಾರಿ ಹಿಡಿಯುವುದಾದರೆ ನೀಟ್ ಪರೀಕ್ಷೆಯ ಅಗತ್ಯವೇನಿದೆ ಎಂದು ಪ್ರಶ್ನಿಸಿದೆ.